ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು 1 ನೇ ಅಧಿಕ ಜೆಎಂಎಫ್‌ಸಿ ನ್ಯಾಯಾಲಯ
ರಾಣೇಬೆನ್ನೂರು.
ಸಿ.ಸಿ.ಸಂಖ್ಯೆ: 80/2023

ಪಿ ಡಬ್ಲ್ಯೂ: 5
ಸಿ ಡಬ್ಲ್ಯೂ: 2

ಸಾಕ್ಷಿಯ ಹೆಸರು : ಬಸವರಾಜ

ತಂದೆಯ ಹೆಸರು : ಈಶಪ್ಪ ಬಣಕಾರ

ವಯಸ್ಸು : 40

ಉದ್ಯೋಗ : ಚಾಲಕ

ವಾಸಸ್ಥಳ : ಚಳಗೇರಿ

ದಿನಾಂಕ: 21-01-2026 ರಂದು ಸಾಕ್ಷಿಯನ್ನು ಕರೆಯಿಸಿ ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ. ರವರಿಂದ:**

ಸಾಕ್ಷಿದಾರರಿಗೆ ನಿಪಿ 2 ರ ಮಹಜರನ್ನು ತೋರಿಸಲಾಗಿ ಅದರಲ್ಲಿನ ತಮ್ಮ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಅದನ್ನು **ನಿಪಿ 2 ಡಿ** ಎಂದು ಗುರುತಿಸಲಾಯಿತು. ಪೊಲೀಸರ ಕೋರಿಕೆಯ ಮೇರೆಗೆ ಸಹಿ ಮಾಡಿರುತ್ತೇನೆ. ಯಾವ ವಿಚಾರಕ್ಕೆ ಸಹಿ ಮಾಡಲಾಗಿದೆ ಎಂದು ನನಗೆ ತಿಳಿದಿಲ್ಲ. ನಿಪಿ 2 ರಲ್ಲಿ ಏನು ಬರೆಯಲಾಗಿದೆ ಎಂದು ನನಗೆ ತಿಳಿದಿಲ್ಲ. ನಮ್ಮ ಸಮಕ್ಷಮ ಯಾವುದೇ ವಸ್ತುಗಳನ್ನು ಅಮಾನತುಪಡಿಸಿಕೊಂಡಿರುವುದಿಲ್ಲ.

**ಮಾನ್ಯ ಸಸಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು**

**ಪಾಟೀ ಸವಾಲು: ಮಾನ್ಯ ಸ.ಸ.ಅ. ರವರಿಂದ:**

ದಿನಾಂಕ 29-03-2023 ರಂದು ಸಂಜೆ 07-30ರ ಸಮಯದಲ್ಲಿ ಅಬಕಾರಿ ಅಧಿಕಾರಿಗಳು ಅಬಕಾರಿ ಅಕ್ರಮಗಳನ್ನು ತಡೆಯುವ ಸಲುವಾಗಿ ನನ್ನನ್ನು ಹಾಗೂ ಚಾ ಸಾ 3 ರವರನ್ನು ಪಂಚರನ್ನಾಗಿ ಬರಮಾಡಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಕರೂರು ಗ್ರಾಮದಿಂದ ಚಳಗೇರಿಗೆ ಹೋಗುವ ರೈಲ್ವೆ ಮೇಲ್ ಸೇತುವೆಯ ಬಳಿ ರಸ್ತೆಗಾವಲು ಮಾಡುತ್ತಿದ್ದಾಗ ಆರೋಪಿಯು ಯಾವುದೇ ಪರವಾನಿಗೆ ಇಲ್ಲದೇ ಮದ್ಯ ಸಾಗಾಟ ಮಾಡುವಾಗ ಸಿಕ್ಕಿಬಿದ್ದಿದ್ದು ,

ಅಧಿಕಾರಿಗಳನ್ನು ನೋಡಿ ವಾಹನ ಹಾಗೂ ಚೀಲವನ್ನು ಬಿಟ್ಟು ಆರೋಪಿ ಓಡಿ ಹೋಗಿರುತ್ತಾರೆ ಎಂದರೆ ಸರಿಯಲ್ಲ. ಅವರು ಬಿಟ್ಟು ಹೋದ ವಾಹನ ಹಾಗೂ ಚೀಲದಲ್ಲಿನ ಮದ್ಯವನ್ನು ನಮ್ಮ ಸಮಕ್ಷಮ ಪರಿಶೀಲಿಸಿ ನಿ ಪಿ 2 ಮಹಜರು ಮೂಲಕ ಮದ್ಯವನ್ನು ಅಮಾನತುಪಡಿಸಿಕೊಳ್ಳಲಾಯಿತು ಎಂದರೆ ನನಗೆ ತಿಳಿದಿಲ್ಲ. ಮಾದರಿ ಮದ್ಯವನ್ನು ಪ್ರತ್ಯೇಕಿಸಿ, ವರದಿ ಸಿದ್ದಪಡಿಸಿ, ಓದಿ ಹೇಳಿ ನನ್ನ ಸಹಿ ಪಡೆದುಕೊಳ್ಳಲಾಗಿದೆ ಎಂದರೆ ಸರಿಯಲ್ಲ. ಆರೋಪಿಯ ಪರಿಚಯ ಇರುತ್ತದೆ. ಆದ್ದರಿಂದ ಅವರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿ ಪರ ಇಲ್ಲ.**

ಮರು ವಿಚಾರಣೆ ಇಲ್ಲ.

ತೆ.ನ್ಯಾದಲ್ಲಿ ಬೆ.ಮಾಡಲಾಯಿತು. ನನ್ನ ಸಮಕ್ಷಮ

ಸಹಿ

ಓ ಹೇ ಕೆ ಸರಿ ಇದೆ. ಪ್ರಧಾನ ದಿವಾಣಿ ನ್ಯಾಯಾಧೀಶರು,
ರಾಣೇಬೆನ್ನೂರು.